**ಬೆಳಗಾವಿಯ 7 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ, ಚಿಕ್ಕೋಡಿ.**

**ಎಸ್.ಸಿ.ನಂ. 5002/2025**

**ಸಿ.ಡಬ್ಲ್ಯೂಃ-12 ಪಿ.ಡಬ್ಲ್ಯೂಃ-13**

**ದಿಃ 04.03.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋದಿಸಲಾಯಿತು.**

| | | |
|---|---|---|
| ಪೂರ್ಣ ಹೆಸರು | : | ಸಮೀರ ಫಿರೋಜ ಮೇಸ್ತ್ರಿ |
| ವಯಸ್ಸು | : | 21 ವರ್ಷ. |
| ಉದ್ಯೋಗ | : | ವ್ಯಾಪಾರ |
| ವಾಸಸ್ಥಳ | : | ನಿಪ್ಪಾಣಿ. |

**ಮುಖ್ಯ ವಿಚಾರಣೆಃ-** ಮಾನ್ಯ ಸರಕಾರಿ ಅಭಿಯೋಜಕರವರಿಂದಃ-

1) ಚಾ.ಸಾ.17, ಮೃತ ಅಶ್ರಫಅಲಿ ಗೊತ್ತು. ನ್ಯಾಯಾಲಯದ ಮುಂದೆ ವಿ.ಸಿ. ಮುಖಾಂತರ ಹಾಗೂ ಪ್ರತ್ಯಕ್ಷವಾಗಿ ಹಾಜರಿರುವ ಆರೋಪಿತರನ್ನು ಈ ಮೊದಲು ನೋಡಿಲ್ಲ.

2) ಅಶ್ರಫಅಲಿ ಈಗ್ಗೆ ಒಂದೂವರೆ ವರ್ಷದ ಹಿಂದೆ ನಿಪ್ಪಾಣಿಯ ಭೀಮ ನಗರದಲ್ಲಿ ಯಾರೋ ಕೊಲೆ ಮಾಡಿದ್ದರಿಂದ ಮೃತಪಟ್ಟಿದ್ದಾನೆ. ಆತನ ಸಾವಿಗೆ ಯಾರು ಕಾರಣ ಅಂತಾ ಗೊತ್ತಿಲ್ಲ. ಆರೋಪಿತರು ಆತನನ್ನು ಕೊಲೆ ಮಾಡಿಲ್ಲ. ಆರೋಪಿತರು ಹಾಗೂ ನಮ್ಮ ಮದ್ಯೆ ಹಳೆಯ ದ್ವೇಷ ಯಾವುದು ಇರಲಿಲ್ಲ. ಆರೋಪಿತರು ನಮ್ಮ ಮೇಲೆ ಯಾವುದೇ ಕಾಲಕ್ಕೂ ವೈರತ್ವ

ಸಾಧಿಸುತ್ತಿರಲಿಲ್ಲ.

3) ಒಂದೂವರೆ ವರ್ಷದ ಹಿಂದೆ ರಾತ್ರಿ 08.30 ಗಂಟೆ ಸುಮಾರಿಗೆ ಅಶ್ರಫಅಲಿಗೆ ಭೀಮ ನಗರದಲ್ಲಿ ಯಾರೋ ಹೊಡೆದಿದ್ದಾರೆ ಅಂತಾ ಗೊತ್ತಾಗಿತ್ತು. ನಾನು ಘಟನೆ ನೋಡಿಲ್ಲ. ಆಶ್ರಫಅಲಿ ಹೇಗೆ, ಎಲ್ಲಿ ಮತುತ ಯಾವ ವಿಚಾರವಾಗಿ ಮೃತಪಟ್ಟ ಅಂತಾ ಗೊತ್ತಿಲ್ಲ. ಆ ಕುರಿತು ಯಾವುದೇ ಹೇಳಿಕೆಗಳನ್ನು ನೀಡಿಲ್ಲ.

4) ಸಾಕ್ಷಿಗೆ ಬಿ. ಎನ್. ಎಸ್. ಕಲಂ 183 ನೇದ್ದರ ಕೆಳಗೆ ದಾಖಲಿಸಿಕೊಂಡ ಹೇಳಿಕೆ ತೋರಿಸಲಾಗಿ, ತನ್ನ ಸಹಿ ನೋಡಿ ಒಪ್ಪಿಕೊಂಡಿದ್ದು, ಸದರಿ ದಾಖಲೆಯನ್ನು ನಿ.ಪಿ.47, ಸಾಕ್ಷಿ ಸಹಿಯನ್ನು ನಿ.ಪಿ.47(ಎ) ಅಂತಾ ಗುರುತಿಸಲಾಯಿತು. ಅದರಲ್ಲಿ ಬರೆದ ವಿಚಾರ ಗೊತ್ತಿಲ್ಲ. ಪೋಲಿಸರು ಹೇಳಿದಂತೆ ನ್ಯಾಯಾಧೀಶರ ಮುಂದೆ ಹೇಳಿದ್ದೇನೆ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ನೀಡಬೇಕೆಂದು ಮಾನ್ಯ ಸರಕಾರಿ ಅಭಿಯೋಜಕರು ಕೋರಿದ್ದು, ಪರಿಶೀಲಿಸಿ, ಅನುಮತಿಸಲಾಯಿತು)**

**ಪಾಟೀ ಸವಾಲುಃ– ಮಾನ್ಯ ಸರಕಾರಿ ಅಭಿಯೋಜಕರವರಿಂದಃ**

1) ಚಾ.ಸಾ.22 ಆಯಾನ ಎಕ್ಸಂಬಿ ನನ್ನ ಗೆಳೆಯ ಎಂದರೆ ಸರಿಯಲ್ಲ. ದಿನಾಂಕಃ 02.10.2024 ರಂದು ಚಾ.ಸಾ.22 ರವರ ಜನ್ಮ ದಿನ ಇತ್ತು

ಎಂದರೆ ಸರಿಯಲ್ಲ. ಆ ದಿನ ನಾನು, ಚಾ.ಸಾ.1, ಅಶ್ರಫಅಲಿ ಹಾಗೂ ನನ್ನ ಗೆಳೆಯರಾದ ಚಾ.ಸಾ.13 ರಿಂದ 16 ರವರು ಕೂಡಿಕೊಂಡು ನಿಪ್ಪಾಣಿಯ ಭೀಮ ನಗರದಲ್ಲಿರುವ ಮುನಸಿಪಲ್ ಶಾಲೆಯ ಹಿಂದಿನ ಬದಿಯಲ್ಲಿರುವ ಜಲಕುಂಭದ ಕಟ್ಟೆಯ ಮೇಲೆ ಕೇಕ್ ಕತ್ತರಿಸುವ ಕಾರ್ಯಕ್ರಮ ಇಟ್ಟುಕೊಂಡು ಅಲ್ಲಿ ಸೇರಿದ್ದೇವು ಎಂದರೆ ಸರಿಯಲ್ಲ. ಅಲ್ಲಿಗೆ ಆಯಾನ್ ಇನ್ನೂ ಬಂದಿರಲಿಲ್ಲ ಎಂದರೆ ಸರಿಯಲ್ಲ. ಆಗ ಆರೋಪಿತರೆಲ್ಲ ತಮ್ಮ ಕೈಯಲ್ಲಿ ನನಗೀಗ ತೋರಿಸಿದ ಮು.ಮಾ.1 ರಿಂದ 5 ವಸ್ತುಗಳಾದ ಮಚ್ಚು, ತಲವಾರಗಳು, ಗುಪ್ತಿ ಆಯುಧವನ್ನು ಹಿಡಿದುಕೊಂಡು ಚಾ.ಸಾ.1 ಹಾಗೂ ಅಶ್ರಫಅಲಿ ಮೇಲೆ ಹಲ್ಲೆ ಮಾಡಲು ಬಂದರು ಎಂದರೆ ಸರಿಯಲ್ಲ. ಆಗ ನಾವೆಲ್ಲ ಓಡಿ ಹೋದೆವು. ಅಶ್ರಪಅಲಿಗೆ ಈ ಮುಂಚೆ ಕಾಲಿಗೆ ಪೆಟ್ಟಾಗಿದ್ದರಿಂದ ಓಡಲಾಗದೇ ಆರೋಪಿತರ ಕೈಯಲ್ಲಿ ಸಿಕ್ಕಿಹಾಕಿಕೊಂಡ ಎಂದರೆ ಸರಿಯಲ್ಲ. ಆಗ ಆರೋಪಿತರೆಲ್ಲ ಸೇರಿ ಅವರಿಗೆ ಮನಸ್ಸಿಗೆ ಬಂದಂತೆ ಸದರಿ ಆಯುಧಗಳಿಂದ ಆತನ ತಲೆ, ಬೆನ್ನು ಹಾಗೂ ಮೈಕೈ ಮೇಲೆಲ್ಲಾ ಹೊಡೆದು ಗಂಭೀರ ಸ್ವರೂಪದ ಗಾಯ ಪಡಿಸಿದರು ಎಂದರೆ ಸರಿಯಲ್ಲ. ಆಗ ರಾತ್ರಿ 08.20 ಗಂಟೆಯಾಗಿತ್ತು ಹಾಗೂ ಪುರಸಭೆಯ ಲೈಟ ಬೆಳಕು ಇತ್ತು ಎಂದರೆ ಸರಿಯಲ್ಲ. ನಂತರ ಆರೋಪಿತರೆಲ್ಲ ಮೋಟಾರಸೈಕಲಗಳನ್ನು ತೆಗೆದುಕೊಂಡು ಓಡಿ ಹೋದರು ಎಂದರೆ ಸರಿಯಲ್ಲ. ಅವರ ಕೈಗಳಲ್ಲಿದ್ದ ಆಯುಧಗಳನ್ನು ತೆಗೆದುಕೊಂಡು ಹೋದರು ಎಂದರೆ ಸರಿಯಲ್ಲ. ಆ ಕಾಲಕ್ಕೆ ನನಗೀಗ ತೋರಿಸಿದ ಮು.ಮಾ.6 ಕೊಡಲಿ ಗುನ್ನಾ ಸ್ಥಳದಲ್ಲಿ ಬಿದ್ದಿತ್ತು ಎಂದರೆ ಸರಿಯಲ್ಲ. ನಂತರ ಚಾ.ಸಾ.1 ರವರು ಆತನ ತಂದೆಯನ್ನು ಪೋನ ಮಾಡಿ ಕರೆಸಿಕೊಂಡು ಅಶ್ರಫಅಲಿಯನ್ನು ಸಂಬಂಧಿಕರ ಸಹಾಯದಿಂದ ನಿಪ್ಪಾಣಿ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ, ಹೆಚ್ಚಿನ ಉಪಚಾರಕ್ಕೆ ಕೊಲಾಪೂರದ

ಸಿ. ಪಿ. ಆರ್. ಆಸ್ಪತ್ರೆಗೆ ಕಳುಹಿಸಿ ಕೊಟ್ಟರು ಎಂದರೆ ಸರಿಯಲ್ಲ. ಅದಾದ ನಂತರ ದಿನಾಂಕಃ 03.10.2024 ರಂದು ಠಾಣೆಗೆ ಹೋಗಿ ಘಟನೆ ಹಿನ್ನೆಲೆ ಕುರಿತು 3ನೇ ಅರೋಪಿಯಾದ ರವಿ ಶಿರಗಾಂವಿ ಆಶ್ರಫಅಲಿಗೆ ನಿಪ್ಪಾಣಿಯ ಕೋಟಿವಾಲೆ ಕೂಟದಲ್ಲಿ ದುರ್ಗುಟ್ಟಿ ನೋಡಿದ್ದರಿಂದ ಅಶ್ರಫಅಲಿ ಹಾಗೂ ಆತನ ಮದ್ಯೆ ಜಗಳವಾಗಿತ್ತು ಎಂದರೆ ಸರಿಯಲ್ಲ. ಒಬ್ಬ ಅಭಿಷೇಕ ದತ್ತವಾಡೆಯವರನ್ನು ಚಾ.ಸಾ.1 ಹಾಗೂ ಅಶ್ರಪಅಲಿ ಕೂಡಿ ಕೊಲೆ ಮಾಡಿದ್ದರಿಂದ ಆರೋಪಿತರು ಅವರ ಮೇಲೆ ಸಿಟ್ಟಾಗಿದ್ದರು ಎಂಬುದಾಗಿ, ಹಾಗೂ ಅರ್ರಫಅಲಿ ಚಿಕಿತ್ಸೆ ಫಲಕಾರಿಯಾಗದೇ ಸಿ. ಪಿ. ಆರ್. ಆಸ್ಪತ್ರೆಯಲ್ಲಿ ಮೃತಪಟ್ಟಿದ್ದಾಗಿ ನನಗೀಗ ವಿವರವಾಗಿ ಓದಿ ಹೇಳಲಾದ "ನನ್ನ ತಾಯಿ ................ ಸರಿ ಇರುತ್ತದೆ" ಎಂಬುದಾಗಿ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆ ಭಾಗವನ್ನು ನಿ.ಪಿ.48 ಎಂದು ಗುರುತಿಸಲಾಯಿತು.

2) ದಿನಾಂಕಃ 09.10.2024 ರಂದು ನಾನು ಮತ್ತೇ ಠಾಣೆಗೆ ಹಾಜರಾಗಿ 12, 13ನೇ ಆರೋಪಿತರು ಅಶ್ರಫಅಲಿಯ ಚಲನ ವಲನ ಕುರಿತು ಉಳಿದ ಆರೋಪಿತರಿಗೆ ಮಾಹಿತಿ ಕೊಟ್ಟು ಗುನ್ನೆಯಲ್ಲಿ ಭಾಗಿಯಾಗಿದ್ದಾರೆಂದು ನನಗೀಗ ವಿವರವಾಗಿ ಓದಿ ಹೇಳಲಾದ "ಈಗ ತಾವು ................ ಈಗ ತಿಳಿಯಿತು" ಎಂಬುದಾಗಿ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆ ಭಾಗವನ್ನು ನಿ.ಪಿ.49 ಎಂದು ಗುರುತಿಸಲಾಯಿತು.

3) ದಿನಾಂಕಃ 16.12.2024 ರಂದು ನಿಪ್ಪಾಣಿಯ ನ್ಯಾಯಾಧೀಶರ

ಮುಂದೆ ನನ್ನನ್ನು ಹಾಜರು ಪಡಿಸಿದಾಗ ನಾನೇ ಸ್ವಂತ ಮಾಹಿತಿ ಮೇರೆಗೆ ನನಗೀಗ ವಿವರವಾಗಿ ಓದಿ ಹೇಳಲಾದ ನಿ.ಪಿ.47 ರಂತೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ.

4) ಸದರಿ ಎಲ್ಲ ವಿಚಾರ ಗೊತ್ತಿದ್ದರೂ ಕೂಡ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ– ಆರೋಪಿತರ ಪರ:– ಏನೂ ಇಲ್ಲ.**

**ಮರು ವಿಚಾರಣೆ** : ಇರುವುದಿಲ್ಲ.

(ಈ ಸಾಕ್ಷಿಯ ಸಾಕ್ಷ್ಯದ ಸಮಯದಲ್ಲಿ 1 ರಿಂದ 5, 7, 8 ನೇ ಆರೋಪಿತರನ್ನು ಕಾರಾಗೃಹದಿಂದ ವಿ.ಸಿ. ಮೂಲಕ ಹಾಜರಪಡಿಸಲಾಯಿತು)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಗಣಕೀಕರಣ ಮಾಡಲಾಯಿತು.)

(ಸಾಕ್ಷಿಗೆ ಓ ಹೆ ಕೆ ಸರಿ ಅದೆ)

ಬೆಳಗಾವಿಯ 7 ನೇ ಹೆಚ್ಚುವರಿ ಜಿಲ್ಲಾ ಮತ್ತು
ಸತ್ರ ನ್ಯಾಯಾಧೀಶರು, ಚಿಕ್ಕೋಡಿ.